ಜೆಎಸ್ ಎಸ್ ಮಹಾವಿದ್ಯಾಪೀಠ

**ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು**

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
ಊಟಿರಸ್ತೆ, ಮೈಸೂರು-570 025, ಕರ್ನಾಟಕ

50 GOLDEN JUBILEE JSS COLLEGE OF ARTS, COMMERCE & SCIENCE OOTY ROAD, MYSORE

1916 H.H. Jagadguru Dr. Sri Shivarathri Rajendra Mahaswamiji 2015 Centenary Celebrations

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ: 17.10.2015

## ಪ್ರಕಟಣೆ ಕೃಪೆಗಾಗಿ

ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು, ಊಟಿ ರಸ್ತೆ, ಮೈಸೂರಿನಲ್ಲಿ ದಿನಾಂಕ:16.10.2015 ರಂದು 2015-16 ನೇ ಸಾಲಿನಲ್ಲಿ ಪ್ರವೇಶ ಪಡೆದ ಎಲ್ಲಾ ಸ್ನಾತಕೋತ್ತರ ವಿಭಾಗದ ವಿದ್ಯಾರ್ಥಿಗಳಿಗೆ ಪುನಶ್ಚೇತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿದ್ದ ಮೈಸೂರು ವಿಶ್ವವಿದ್ಯಾನಿಲಯದ ಮಾನ್ಯ ಕುಲಪತಿಗಳಾದ ಪ್ರೊ ಕೆ ಎಸ್ ರಂಗಪ್ಪನವರು ಹೊಸದಾಗಿ ಪ್ರವೇಶ ಪಡೆದ ಸ್ನಾತಕೋತ್ತರ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು. ಒಂದೊಂದು ಜ್ಞಾನ ಶಾಖೆಗೆ ಪ್ರತ್ಯೇಕವಾದ ವಿಶ್ವವಿದ್ಯಾಲಯವನ್ನು ತೆರೆಯುವ ಬದಲು ಒಂದೇ ವಿಶ್ವವಿದ್ಯಾಲಯದಲ್ಲಿ ಬಹು ಶಾಸ್ತ್ರೀಯ ಅಧ್ಯಯನಕ್ಕೆ ಅವಕಾಶ ಕಲ್ಪಿಸಿಕೊಡಬೇಕು.ಆ ದೆಸೆಯಲ್ಲಿ ಮೈಸೂರು ವಿಶ್ವವಿದ್ಯಾನಿಲಯ ಮತ್ತು ಅದರ ವ್ಯಾಪ್ತಿಯಲ್ಲಿ ಬರುವ ಜೆಎಸ್ಎಸ್ ಕಾಲೇಜು ಕಾರ್ಯನಿರ್ವಹಿಸುತ್ತಿರುವುದು ಶ್ಲಾಘನೀಯವೆಂದರು. ಈ ಕಾಲೇಜಿನಲ್ಲಿ ಗ್ರಾಮೀಣ ವಿದ್ಯಾರ್ಥಿಗಳೇ ಹೆಚ್ಚು ಸಂಖ್ಯೆಯಲ್ಲಿ ಶಿಕ್ಷಣ ಪಡೆಯುತ್ತಿರುವುದನ್ನು ಮೆಚ್ಚಿ ಗ್ರಾಮೀಣ ವಿದ್ಯಾರ್ಥಿಗಳೇ ಇಂದು ಹೆಚ್ಚು ಸಾಧನೆ ಮಾಡಿರುವುದು ಇತಿಹಾಸದಲ್ಲಿ ದಾಖಲೆಯಾಗಿದೆ ಎಂದರು.ಉತ್ತಮ ಬೋಧಕ ವರ್ಗವನ್ನು ಹೊಂದಿರುವ ಈ ಕಾಲೇಜು ಬೋಧನೆ ಮತ್ತು ಕಲಿಕೆಗೆ ಉತ್ತಮ ವಾತಾವರಣವನ್ನು ಕಲ್ಪಿಸಿದೆ ಅದನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ತಿಳಿಸಿದರು.

ಜೆಎಸ್ಎಸ್ ಮಹಾವಿದ್ಯಾಪೀಠಧ ಕಾಲೇಜು ಶಿಕ್ಷಣ ವಿಭಾಗದ ಹೆಚ್ಚುವರಿ ನಿರ್ದೇಶಕರಾದ ಡಾ. ಮೃತ್ಯುಂಜಯ ಪಿ ಕುಳೇನೂರ್ ಅವರು ಸ್ನಾತಕೋತ್ತರ ವಿದ್ಯಾರ್ಥಿಗಳು ಹೆಚ್ಚು ಶ್ರಮವಹಿ ಅಧ್ಯಯನ ಮಾಡಬೇಕು. ಆಮೂಲಕ ಜೆಎಸ್ಎಸ್ ಸಂಸ್ಥೆಗೆ ಮತ್ತು ಮೈಸೂರು ವಿಶ್ವವಿದ್ಯಾನಿಲಯಕ್ಕೆ ಕೀರ್ತಿ, ಗೌರವವನ್ನು ತರಬೇಕೆಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜೆಎಸ್ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ಪ್ರೊ ಟಿ ಡಿ ಸುಬ್ಬಣ್ಣ ನವರು ಮಾತನಾಡಿ, ಪೂಜ್ಯ ಶ್ರೀಗಳು ಸಮಾಜದ ಏಳ್ಗೆಗೆ ಶ್ರಮಿಸುತ್ತಿರುವ ಅವರ ದೂರದೃಷ್ಠಿತನ ಮತ್ತು ಆಶಯಗಳನ್ನು ಸಾಕಾರಗೊಳಿಸುವ ಗುರುತರವಾದ ಜವಾಬ್ಧಾರಿ ನಮ್ಮೆಲ್ಲರದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ ಬಿ ವಿ ಸಾಂಬಶಿವಯ್ಯನವರು'ಲ್ಲರನ್ನು ಆತ್ಮೀಯವಾಗಿ ಸ್ವಾಗತಿಸಿದರು. ಕಾಲೇಜಿನ ಡೀನ್‌ರಾದ ಡಾ. ಕೆ ವಿ ಸುರೇಶ್ ರವರು ಉಪಸ್ಥಿತರಿದ್ದರು. ಕು. ರಚಿತಪ್ರಭು ಪ್ರಾರ್ಥನೆ ಮಾಡಿದರು. ಪದವಿ ಕಾಲೇಜಿನ ಪ್ರಾಂಶುಪಾಲರಾದ ಪ್ರೊ ಎಂ ಮಹದೇವಪ್ಪನವರು ವಂದಿಸಿದರು. ಡಾ ಬಿ ವಿ ಲತ ಕಾರ್ಯಕ್ರಮವನ್ನು ನಿರೂಪಿಸಿದರು

(ಪ್ರೊ ಎಂ ಮಹದೇವಪ್ಪ)
ಪ್ರಾಂಶುಪಾಲರು
ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
ಊಟಿ ರಸ್ತೆ, ಮೈಸೂರು-25

ಗೆ
ಸಂಪಾದಕರು

_ _ _ _ _ _ _ _ _ _

_ _ _ _ _ _ _ _ _ _ _

ಮೈಸೂರು